**All India Radio: Bangalore**
**Regional Bulletin In Kannada**
**02.02.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.02.2025 / 2.30 p.m.**

***************

ಮುಖ್ಯಾಂಶಗಳು

೧. ನವ ಮಂಗಳೂರು ಬಂದರಿನಲ್ಲಿ ಕರಾವಳಿ ಕಾವಲು ಪಡೆಯಿಂದ ರೈಸಿಂಗ್ ಡೇ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗಿ, ಮೆಚ್ಚುಗೆ ವ್ಯಕ್ತ

೨. ರಾಜ್ಯದ ದ್ವಿತೀಯ ಸ್ತರದ ನಗರಗಳಲ್ಲಿ ಕಳೆದ ವರ್ಷ ೨ ಸಾವಿರ ನವೋದ್ಯಮ ಆರಂಭ - ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ

೩. ಬೆಂಗಳೂರಿನ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ಇದೇ ೨೭ ರಿಂದ ಮೂರು ದಿನಗಳ ಕಾಲ ರಾಷ್ಟ್ರೀಯ ತೋಟಗಾರಿಕಾ ಮೇಳ ಆಯೋಜನೆ

೪. ಮಹಿಳೆಯರ ವಿಶ್ವ ಪಿಕಲ್ ಬಾಲ್ ಪ್ರಶಸ್ತಿಗಾಗಿ ಬೆಂಗಳೂರು ಜವಾನ್ಸ್ ತಂಡ, ಪುಣೆ ಯುನೈಟೆಡ್ ತಂಡದ ನಡುವೆ ಇಂದು ಮುಖಾಮುಖಿ

***************

ಭಾರತೀಯ ಕರಾವಳಿ ರಕ್ಷಣಾ ಪಡೆಯ ನೇತೃತ್ವದಲ್ಲಿ ನವ ಮಂಗಳೂರು ಬಂದರಿನಲ್ಲಿಂದು ನಡೆದ ಕೋಸ್ಟ್ ಗಾರ್ಡ್‌ನ ೪೯ ನೆಯ ರೈಸಿಂಗ್ ಡೇ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗವಹಿಸಿದರು.

'ರೈಸಿಂಗ್ ಡೇ" ಹಿನ್ನೆಲೆಯಲ್ಲಿ ಆಳ ಸಮುದ್ರದಲ್ಲಿ ಅಣಕು ಕಾರ್ಯಾಚರಣೆ, ರಕ್ಷಣಾ ಕಾರ್ಯಾಚರಣೆ ನಡೆಯಿತು. ನವಮಂಗಳೂರು ಬಂದರು ಪ್ರಾಧಿಕಾರದಿಂದ ಸುಮಾರು ೩೦ ನಾಟಿಕಲ್ ಮೈಲು ದೂರದಲ್ಲಿ ಸಮುದ್ರದ ನಡುವೆ ನಡೆದ ಬೃಹತ್ ಹಡಗು, ಹೆಲಿಕಾಪ್ಟರ್ ಮೂಲಕ ಆಕರ್ಷಕ ಕಸರತ್ತನ್ನು ವೀಕ್ಷಿಸಿದ ರಾಜ್ಯಪಾಲರು, ಕೋಸ್ಟ್ ಗಾರ್ಡ್ ಕಾರ್ಯ ವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ವಿಧಾನ ಸಭಾ ಅಧ್ಯಕ್ಷ ಯು.ಟಿ.ಖಾದರ್, ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ , ಕೋಸ್ಟ್ ಗಾರ್ಡ್ ಡಿಐಜಿ ಪ್ರವೀಣ್ ಕುಮಾರ್ ಮಿಶ್ರಾ ಮತ್ತಿತರರು ಉಪಸ್ಥಿತರಿದ್ದರು.

***************

ರಾಜ್ಯದ ದ್ವಿತೀಯ ಸ್ತರದ ನಗರಗಳಲ್ಲಿ ಕಳೆದ ವರ್ಷ ೨ ಸಾವಿರ ನವೋದ್ಯಮಗಳು ಆರಂಭವಾಗಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಅವರು ಹುಬ್ಬಳ್ಳಿಯಲ್ಲಿ ನಿನ್ನೆ ಟೈ ಹುಬ್ಬಳ್ಳಿ ವತಿಯಿಂದ ಏರ್ಪಡಿಸಲಾಗಿದ್ದ ಶೃಂಗಸಭೆ ಉದ್ಘಾಟಿಸಿ ಮಾತನಾಡಿ, ಕಳೆದ ವರ್ಷ ಆರಂಭವಾದ ಸುಮಾರು ೯೮೬ ನವೋದ್ಯಮಗಳಿಗೆ ಸರ್ಕಾರ ನೆರವು ನೀಡಿದೆ. ಈ ಪೈಕಿ ೨೮ ಸ್ಟಾರ್ಟ್‌ಅಪ್‌ಗಳನ್ನು ಮಹಿಳೆಯರೇ ಮುಂದುವರೆಸುತ್ತಿದ್ದಾರೆ. ಬೆಂಗಳೂರಿನಂತೆಯೇ ರಾಜ್ಯದ ಉಳಿದ ಪ್ರದೇಶಗಳನ್ನು ಅಭಿವೃದ್ಧಿಪಡಿಸಬೇಕೆಂಬುದು ಸರ್ಕಾರದ ಗುರಿಯಾಗಿದೆ ಎಂದರು.

ಧಾರವಾಡದ ಐಐಐಟಿ ಸೆಂಟರ್ ಅನ್ನು ಪಾರಮ್ಯತೆಯ ಕೇಂದ್ರವನ್ನಾಗಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ಎಂದು ಈ ಸಂದರ್ಭದಲ್ಲಿ ತಿಳಿಸಿದರು.

***************

ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ದಾವಣಗೆರೆಯಲ್ಲಿಂದು ಎಸ್‌ಎಸ್ ಕೇರ್ ಟ್ರಸ್ಟ್ ಮತ್ತು ವಿವಿಧ ಕ್ಯಾನ್ಸರ್ ಆಸ್ಪತ್ರೆ, ಸಂಶೋಧನಾ ಸಂಸ್ಥೆಗಳ ಆಶ್ರಯದಲ್ಲಿ ಕಾಲ್ನೆಡಿಗೆ ಜಾಥಾ ಜರುಗಿತು.

ನಗರದ ಗುಂಡಿ ಮಹದೇವಪ್ಪ ವೃತ್ತದಲ್ಲಿ ನಡೆದ ಜಾಗೃತಿ ಜಾಥಕ್ಕೆ ಚಾಲನೆ ನೀಡಿದ ಕ್ಯಾನ್ಸರ್ ಫೌಂಡೇಶನ್‌ನ ಡಾ.ಸುನೀಲ್ ಬ್ಯಾಡಗಿ ಮಾತನಾಡಿ, ಫೆಭ್ರವರಿ ೪ ರಂದು ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ಜನರಲ್ಲಿ ಖಾಯಿಲೆ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಕಾಲ್ನಡಿಗೆ ಜಾಥ ಹಮ್ಮಿಕೊಳ್ಳಲಾಗಿದೆ ಎಂದರು.

ಶಾಮನೂರು ಶಿವಶಂಕರಪ್ಪ ಸಾರ್ವಜನಿಕ ಆಸ್ಪತ್ರೆಯಲ್ಲಿ ಸ್ತನ ಕ್ಯಾನ್ಸರ್‌ಗೆ ಸಂಬಂಧಿಸಿದ ಒಟ್ಟು ೨ಸಾವಿರದ ೫೦೦ ಹಾಗೂ ಗರ್ಭಕಂಠದ ಕ್ಯಾನ್ಸರ್‌ಗೆ ೧ ಸಾವಿರದ ೩೦೦ ಮಹಿಳೆಯರನ್ನು ತಪಾಸಣೆ ಮಾಡಲಾಗಿದೆ. ಎಲ್ಲಾ ಕ್ಯಾನ್ಸರ್ ಪೀಡಿತರಿಗೆ ಎಸ್.ಎಸ್.ಕೇರ್ ಟ್ರಸ್ಟ ವತಿಯಂದ ಉಚಿತ ಚಿಕಿತ್ಸೆ ನೀಡಲಾಗಿದೆ ಎಂದು ತಿಳಿಸಿದರು.

****************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ದೊಡ್ಡಬಳ್ಳಾಪುರ ತಾಲ್ಲೂಕಿನ ವಿವಿಧ ಪಂಚಾಯಿತಿಗಳ ಸುಮಾರು ೨.೧೭ ಕೋಟಿ ರೂಗಳ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಇಂದು ಶಂಕುಸ್ಥಾಪನೆ ನೆರವೇರಿಸಿದರು.

ಮೇಳೇಕೋಟೆ ಗ್ರಾಮ ಪಂಚಾಯಿತಿ, ಮೇಲಿನಜೂಗಾನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಶ್ರೀ ಘಾಟಿ ಸುಬ್ರಮಣ್ಯ

ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಈ ವರ್ಷ ನಡೆದ ರಾಸುಗಳ ಜಾತ್ರೆಯಲ್ಲಿ ಭಾಗವಹಿಸಿದ್ದ ಉತ್ತಮ ರಾಸುಗಳ ವಿಜೇತ ಮಾಲೀಕರಿಗೆ ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಬಹುಮಾನ ವಿತರಿಸಿದರು.

ಘಾಟಿ ಸುಬ್ರಹ್ಮಣ್ಯ ಕ್ಷೇತ್ರದ ಅಭಿವೃದ್ಧಿಗೆ ಎಲ್ಲಾ ಸಹಕಾರ ನೀಡಲಾಗುವುದು ಎಂದು ಅವರು ಹೇಳಿದರು.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊಣಕಾಲು ನೋವಿನ ಹಿನ್ನೆಲೆಯಲ್ಲಿ ಇಂದಿನ ಚಿಕ್ಕಬಳ್ಳಾಪುರ, ರಾಮನಗರ ಭೇಟಿ ಕಾರ್ಯಕ್ರಮವನ್ನು ರದ್ದುಗೊಳಿಸಿದ್ದಾರೆ.

ಮೊಣಕಾಲು ಅಸ್ತಿರಜ್ಜು ನೋವು ಕಂಡು ಬಂದ ಹಿನ್ನೆಲೆಯಲ್ಲಿ ಪರೀಕ್ಷೆ ಹಾಗೂ ಉಪಚಾರ ಪಡೆಯುತ್ತಿದ್ದಾರೆ ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ.

***************

ಬಾಗಲಕೋಟೆ ಜಿಲ್ಲೆಯಲ್ಲಿ ರೈತರಿಗೆ ನೀಡಲಾಗುವ ಕೃಷಿ ಚಟುವಟಿಕೆಗೆ ಪೂರಕವಾದ ಬೀಜ, ಗೊಬ್ಬರ ಯಂತ್ರೋಪಕರಣಗಳಗಳ ಗುಣಮಟ್ಟದ ಬಗ್ಗೆ ಎಚ್ಚರಿಕೆ ವಹಿಸಬೇಕು ಮತ್ತು ಕಳಪೆಯಾದಂತವುಗಳನ್ನು ವಿತರಿಸಬಾರದು ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆ ನೀಡಿದರು.

ನಿನ್ನೆ ನಡೆದ  ಮೂರನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ ಇಲಾಖೆಯಲ್ಲಿ ಬರುವ ಕೆಲವು ಯೋಜನೆಗಳನ್ನು ಪರಿಶಿಷ್ಟ ವರ್ಗದ ಹೆಸರು ಹೇಳಿಕೊಂಡು ಕೆಲವರು ದುರ್ಬಳಕೆ ಮಾಡುತ್ತಿದ್ದಾರೆ.

ಇಂತಹವರನ್ನು ಶೀಘ್ರವಾಗಿ ಪತ್ತೆಹಚ್ಚಿ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು" ಎಂದು ಕೃಷಿ ಇಲಾಖೆ ಅಧಿಕಾರಿಗಳನ್ನು ಎಚ್ಚರಿಸಿದರು.

***************

ಬೆಂಗಳೂರಿನಲ್ಲಿರುವ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ-ಐಐಎಚ್‌ಆರ್ ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ ಇದೇ ೨೭ ರಿಂದ ರಾಷ್ಟ್ರೀಯ ತೋಟಗಾರಿಕಾ ಮೇಳ ವ್ಯವಸ್ಥೆ ಮಾಡಿದೆ.

ಮೂರು ದಿನಗಳ ಕಾಲ ನಡೆಯಲಿರುವ ಈ ಮೇಳದಲ್ಲಿ ಹೊಸ ಆವಿಷ್ಕಾರಗಳ ಪ್ರದರ್ಶನ ರೈತರ ಸಮಸ್ಯೆ ಕುರಿತಾದ ಸಂವಾದ ಕಾರ್ಯಕ್ರಮವನ್ನು ವ್ಯವಸ್ಥೆ ಮಾಡಲಾಗಿದೆ.

ಸಂಸ್ಥೆಯ ಹಿರಿಯ ವಿಜ್ಞಾನಿ ಹಾಗೂ ಮೇಳದ ಪ್ರಸಾರ ಸಮಿತಿಯ ಅಧ್ಯಕ್ಷ ಡಾ.ಪಿ.ನಂದೀಶ್ ಮೇಳದ ಬಗ್ಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಡಾ.ಪಿ.ನಂದೀಶ್

ತೋಟಗಾರಿಕೆ ಉದ್ಯಮದಲ್ಲಿ ರೈತ ಜೀವನವನ್ನು ಸುಧಾರಿಸುವ ಮತ್ತು ಪರಿವರ್ತನೆ ಮಾಡುವ ಭರವಸೆ ನೀಡುವುದಕ್ಕೆ ಈ ಮೇಳ ಸಾಕ್ಷಿಯಾಗಲಿದ್ದು, ೨೦೨೫ ರ ಮೇಳವು ಭಾರತದಲ್ಲಿ ತೋಟಗಾರಿಕೆಯ ಭವಿಷ್ಯಕ್ಕೆ ನಿರ್ಣಾಯಕವಾಗಿರುವ ಮೂರು ಪ್ರಮುಖ ಸ್ತಂಭಗಳಾದ ಪೋಷಣೆ, ಸಬಲೀಕರಣ ಮತ್ತು ಜೀವನೋಪಾಯ, ಮೇಲೆ ಕೇಂದ್ರೀಕರಿಸುತ್ತದೆ ಎಂದು ಡಾ. ಪಿ. ನಂದೀಶ್ ತಿಳಿಸಿದ್ದಾರೆ.

***************

ಹಾವೇರಿ ಜಿಲ್ಲೆಯಲ್ಲಿ ಮಾದಕ ವಸ್ತು ಮಾರಾಟ ಹಾಗೂ ಸೇವನೆ ವಿರುದ್ಧ ನಿರಂತರವಾಗಿ ಕಾರ್ಯಾಚರಣೆ ನಡೆಸಿ, ಜನವರಿ ತಿಂಗಳಲ್ಲಿ ೩೧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ೧೫.೬೧ ಲಕ್ಷ ರೂಪಾಯಿ ಮೌಲ್ಯದ ೧೧೪.೫೦ ಕೆ.ಜಿ ಮಾದಕ ವಸ್ತು ಜಪ್ತಿ ಮಾಡಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಂಶುಕುಮಾರ ತಿಳಿಸಿದ್ದಾರೆ.

ಹಾವೇರಿಯಲ್ಲಿಂದು ಸುದ್ದಿಗಾರರಿಗೆ ಮಾಹಿತಿ ನೀಡಿರುವ ಅವರು, ಜನವರಿಯಲ್ಲಿ ಡ್ರಗ್ಸ್ ಪ್ರಕರಣದಲ್ಲಿ ೮೦ ಜನರನ್ನು ಬಂಧಿಸಲಾಗಿದೆ. ಅರಣ್ಯ ಪ್ರದೇಶದಲ್ಲಿ ಮಾದಕ ವಸ್ತು ಬೆಳೆಯುತ್ತಿರುವ ಅನುಮಾನವಿದ್ದು, ಇದರ ಪರಿಶೀಲನೆಗಾಗಿ ಅರಣ್ಯ ಇಲಾಖೆಯವರಿಗೆ ಆಪರೇಟರ್ ಸಹಿತ ಡ್ರೋನ್ ನೀಡಲಾಗುವುದು. ಡ್ರಗ್ಸ್ ಕುರಿತು ಶಾಲೆ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಲು ೧೪೭ ಕಾರ್ಯಕ್ರಮಗಳನ್ನು ಮಾಡಲಾಗಿದೆ. ಡ್ರಗ್ಸ್ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಯುವಜನತೆಗೆ ಜಾಗೃತಿ ಮೂಡಿಸಲಾಗಿದೆ' ಎಂದು ತಿಳಿಸಿದ್ದಾರೆ.

***************

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಂಡಿರುವ ಫಲಾನುಭವಿಗಳ ಸಮ್ಮೇಳನ ಕಾರ್ಯಕ್ರಮವನ್ನು ಕೋಲಾರದಲ್ಲಿ ಮಾರ್ಚ್ ವೇಳೆಗೆ ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ ಬಾಗೇವಾಡಿ ಹೇಳಿದ್ದಾರೆ.

ಕೋಲಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಿನ್ನೆ ಹಮ್ಮಿಕೊಂಡಿದ್ದ ಫಲಾನುಭವಿಗಳ ಸಮ್ಮೇಳನ ಕಾರ್ಯಕ್ರಮ ಆಯೋಜನೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

****************

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ನಡೆದಿರುವ ಕಿರು ಚಿತ್ರ ಹಾಗೂ ಸಾಕ್ಷ್ಯಚಿತ್ರಗಳ ಪರಿದೃಶ್ಯ ಅಂತಾರಾಷ್ಟ್ರೀಯ ಉತ್ಸವದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರ ಸಚಿವ ಡಾ.ಎಲ್.ಮುರುಗನ್ ಭಾಗವಹಿಸಲಿದ್ದಾರೆ.

****************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದಿರುವ ರಣಜಿ ಟ್ರೋಫಿ ಪಂದ್ಯದ ನಾಲ್ಕನೇ ದಿನವಾದ ಇಂದು ಕರ್ನಾಟಕ ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ಇತ್ತೀಚಿನ ವರದಿ ಬಂದಾಗ ೮ ವಿಕೆಟ್ ನಷ್ಟಕ್ಕೆ ೨೮೧ ರನ್ ಮಾಡಿದೆ.

****************

ಮುಂಬೈನಲ್ಲಿ ಇಂದು ಸಂಜೆ ನಡೆಯಲಿರುವ ಮಹಿಳೆಯರ ವಿಶ್ವ ಪಿಕಲ್ ಬಾಲ್ ಅಂತಿಮ ಪಂದ್ಯದಲ್ಲಿ ಬೆಂಗಳೂರು ಜವಾನ್ಸ್ ತಂಡ ಪುಣೆ ಯುನೈಟೆಡ್ ತಂಡವನ್ನು ಎದುರಿಸಲಿದೆ.

ಮುಂಬೈಯ ಬ್ರಾಬೋರ್ನೆ ಕ್ರೀಡಾಂಗಣದಲ್ಲಿ ಸಂಜೆ ೫ ಗಂಟೆಗೆ ಪಂದ್ಯ ಆರಂಭವಾಗಲಿದೆ. ಎರಡೂ ತಂಡಗಳು ಪಿಕಲ್ ಬಾಲ್ ಲೀಗ್ ಪಂದ್ಯದ ಮೊದಲ ಪ್ರಶಸ್ತಿಯನ್ನು ಗೆದ್ದಿಕೊಳ್ಳಲು ಸಿದ್ಧತೆಗಳನ್ನು ನಡೆಸಿವೆ.

********ಮುಕ್ತಾಯ********